# 2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 41

## ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ನಿರಸನಗೊಳಿಸುವ) ಅಧಿನಿಯಮ, 2020

### ಪ್ರಕರಣಗಳ ಪಟ್ಟಿ

**ಪ್ರಕರಣಗಳು:**


1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. ನಿರಸನ ಮತ್ತು ಉಳಿಸುವಿಕೆಗಳು
3. 2020ರ ಕರ್ನಾಟಕ ಅಧ್ಯಾದೇಶ ಸಂಖ್ಯೆ: 19ರ ನಿರಸನ ಮತ್ತು ಉಳಿಸುವಿಕೆಗಳು


### ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**ಅಧಿನಿಯಮ ಸಂಖ್ಯೆ 2020ರ 41.-** ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2012ನ್ನು (2013ರ ಕರ್ನಾಟಕ ಅಧಿನಿಯಮ 06), ಸದರಿ ಅಧಿನಿಯಮದ ಅನುಷ್ಠಾನದಲ್ಲಿ ಉಂಟಾದ ತೊಂದರೆಗಳು ಮತ್ತು ಅಡಚಣೆಗಳನ್ನು ನಿವಾರಿಸಲು ನಿರಸನಗೊಳಿಸುವುದು ಅವಶ್ಯಕವೆಂದು ಪರಿಗಣಿಸಲಾಗಿದೆ ಮತ್ತು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978ರ (1990ರ ಕರ್ನಾಟಕ ಅಧಿನಿಯಮ 14) ಅಡಿಯಲ್ಲಿ ಈ ಕುರಿತು ನಿಯಮಗಳನ್ನು ರಚಿಸಲು ನಿರ್ಧರಿಸಲಾಗಿದೆ.

ವಿಷಯವು ತುರ್ತುಸ್ವರೂಪದ್ದಾದ್ದರಿಂದ ಮತ್ತು ಕರ್ನಾಟಕ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿ ಇಲ್ಲದಿದ್ದುದರಿಂದ, ಮೇಲಿನ ಉದ್ದೇಶವನ್ನು ಸಾಧಿಸಲು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧ್ಯಾದೇಶ, 2020ನ್ನು (2020ರ ಕರ್ನಾಟಕ ಅಧ್ಯಾದೇಶ 19) ಪ್ರಖ್ಯಾಪಿಸಲಾಗಿತ್ತು.

ಈ ವಿಧೇಯಕವು ಅಧ್ಯಾದೇಶದ ಬದಲಿ ವಿಧೇಯಕವಾಗಿದೆ.

ಆದ್ದರಿಂದ ಈ ವಿಧೇಯಕ.


[2020ರ ವಿಧಾನಸಭೆಯ ವಿಧೇಯಕ ಸಂಖ್ಯೆ: 46, ಕಡತ ಸಂಖ್ಯೆ: ಸಂವ್ಯಶಾಇ 55 ಶಾಸನ 2020]
[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 41ನೇಯ ನಮೂದನೆಯಡಿಯಲ್ಲಿ ಬರುತ್ತದೆ]
[ಕರ್ನಾಟಕ ರಾಜ್ಯ ಪತ್ರದ ಭಾಗ-IVA, ವಿಶೇಷ ಪತ್ರಿಕೆ ಸಂಖ್ಯೆ: 479 ದಿನಾಂಕ: 19.10.2020ರಲ್ಲಿ ಪ್ರಕಟಣೆಗೊಂಡಿದೆ]

## 2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 41

**(2020 ರ ಅಕ್ಟೋಬರ್ ತಿಂಗಳ 19ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)**

# ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ನಿರಸನಗೊಳಿಸುವ) ಅಧಿನಿಯಮ, 2020

**(2020ರ ಅಕ್ಟೋಬರ್ ತಿಂಗಳ 16ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)**

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2012ನ್ನು (2013ರ ಕರ್ನಾಟಕ ಅಧಿನಿಯಮ 06) ನಿರಸನಗೊಳಿಸಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2012ನ್ನು (2013ರ ಕರ್ನಾಟಕ ಅಧಿನಿಯಮ 06) ನಿರಸನಗೊಳಿಸುವುದು ಯುಕ್ತವಾಗಿರುವುದರಿಂದ**;**

ಇದು ಭಾರತ ಗಣರಾಜ್ಯದ ಎಪ್ಪತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ**,** ಎಂದರೆ**:-**

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ನಿರಸನಗೊಳಿಸುವ) ಅಧಿನಿಯಮ, 2020 ಎಂದು ಕರೆಯತಕ್ಕದ್ದು.

(2) ಇದು 28.08.2020ರಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು**.**

**2. ನಿರಸನ ಮತ್ತು ಉಳಿಸುವಿಕೆಗಳು**.- ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2012ನ್ನು (2013ರ ಕರ್ನಾಟಕ ಅಧಿನಿಯಮ 06) (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) ಈ ಮೂಲಕ ನಿರಸನಗೊಳಿಸಲಾಗಿದೆ :

ಪರಂತು, ಅಂಥ ನಿರಸನವು,-

(ಎ) ಹಾಗೆ ನಿರಸನಗೊಂಡ ಯಾವುದೇ ಅಧಿನಿಯಮದ ಅಥವಾ ಅದರ ಮೇರೆಗೆ ಕ್ರಮಬದ್ಧವಾಗಿ ಮಾಡಲಾದ ಅಥವಾ ಮಾಡಲೆಡೆಗೊಟ್ಟ ಯಾವುದೇ ಕಾರ್ಯದ ಪೂರ್ವಜಾರಿಯನ್ನು ಬಾಧಿಸತಕ್ಕದ್ದಲ್ಲ; ಅಥವಾ

(ಬಿ) ಹಾಗೆ ನಿರಸಿತವಾದ ಯಾವುದೇ ಅಧಿನಿಯಮದ ಮೇರೆಗೆ ಆರ್ಜಿಸಲಾದ, ಪ್ರಾಪ್ತವಾದ ಅಥವಾ ವಹಿಸಲಾದ ಯಾವುದೇ ಹಕ್ಕು, ವಿಶೇಷಾಧಿಕಾರ, ಬಾಧ್ಯತೆ ಅಥವಾ ಹೊಣೆಗಾರಿಕೆಯನ್ನು ಬಾಧಿಸತಕ್ಕದ್ದಲ್ಲ; ಅಥವಾ

(ಸಿ) ಹಾಗೆ ನಿರಸನವಾದ ಯಾವುವೇ ಅಧಿನಿಯಮಗಳ ವಿರುದ್ಧ ಮಾಡಲಾದ ಯಾವುದೇ ಅಪರಾಧಕ್ಕೆ ಸಂಬಂಧಿಸಿದಂತೆ, ಗುರಿಯಾದ ಯಾವುದೇ ದಂಡ, ಮುಟ್ಟುಗೋಲು ಅಥವಾ ಶಿಕ್ಷೆಯನ್ನು ಬಾಧಿಸತಕ್ಕದ್ದಲ್ಲ; ಅಥವಾ

(ಡಿ) ಮೇಲೆ ಹೇಳಿದಂಥ ಯಾವುದೇ ಹಕ್ಕು, ವಿಶೇಷಾಧಿಕಾರ, ಬಾಧ್ಯತೆ, ಹೊಣೆಗಾರಿಕೆ, ದಂಡ, ಮುಟ್ಟುಗೋಲು ಅಥವಾ ಶಿಕ್ಷೆಗೆ ಸಂಬಂಧಿಸಿದ ಯಾವುದೇ ತನಿಖೆ, ಕಾನೂನು ವ್ಯವಹರಣೆ ಅಥವಾ ಪರಿಹಾರೋಪಾಯವನ್ನು ಬಾಧಿಸತಕ್ಕದ್ದಲ್ಲ; ಮತ್ತು ನಿರಸನಗೊಳಿಸುವ ಅಧಿನಿಯಮವನ್ನು ಅಂಗೀಕರಿಸಿಲ್ಲದಿದ್ದರೆ ಹೇಗೋ ಹಾಗೆ ಅಂಥ ಯಾವುದೇ ತನಿಖೆಯನ್ನು, ಕಾನೂನು ವ್ಯವಹರಣೆಯನ್ನು ಅಥವಾ ಪರಿಹಾರೋಪಾಯವನ್ನು ನಡೆಸಬಹುದು, ಮುಂದುವರೆಸಬಹುದು ಅಥವಾ ಜಾರಿಗೆ ತರಬಹುದು ಮತ್ತು ಅಂಥ ಯಾವುದೇ ದಂಡ, ಮುಟ್ಟುಗೋಲು ಅಥವಾ ಶಿಕ್ಷೆಯನ್ನು ವಿಧಿಸಬಹುದು.

**3. 2020ರ ಕರ್ನಾಟಕ ಅಧ್ಯಾದೇಶ ಸಂಖ್ಯೆ**: 19**ರ ನಿರಸನ ಮತ್ತು ಉಳಿಸುವಿಕೆಗಳು.-** (1) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧ್ಯಾದೇಶ, 2020ನ್ನು (2020ರ ಕರ್ನಾಟಕ ಅಧ್ಯಾದೇಶ 19) ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದ ಅಡಿಯಲ್ಲಿ ಏನೇ ಮಾಡಿದ್ದರೂ ಅಥವಾ ಯಾವುದೇ ಕ್ರಮವನ್ನು ಕೈಗೊಂಡಿದ್ದರೂ ಈ ಅಧಿನಿಯಮದ ಅಡಿಯಲ್ಲಿ ತಿದ್ದುಪಡಿಯಾದಂತೆ ಅದನ್ನು ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕೆ.ದ್ವಾರಕನಾಥ್ ಬಾಬು)**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ